**All India Radio: Bangalore**
**National Bulletin In Kannada**
**14.07.2026 13.10 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**14.07.2026 13.10 hrs**

**<>><><*><><<>**

ಮುಖ್ಯಾಂಶಗಳು

**೧. ಭಾರತ ಮತ್ತು ಬ್ರಿಟನ್ ನಡುವಿನ ಮಹತ್ವದ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ನಾಳೆಯಿಂದ ಜಾರಿ**

**೨. ನವದೆಹಲಿಯಲ್ಲಿ ಭಾರತ್ ಟೆಕ್ಸ್ ೨೦೨೬ ಕಾರ್ಯಕ್ರಮಕ್ಕೆ ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಚಾಲನೆ**

**೩. ೨೦೨೮-೨೯ರ ಅವಧಿಗೆ ವಿಶ್ವಸಂಸ್ಥೆ ಭದ್ರತಾ ಮಂಡಳಿಯಲ್ಲಿ ಶಾಶ್ವತವಲ್ಲದ ಸ್ಥಾನಕ್ಕಾಗಿ ಚುನಾವಣಾ ಪ್ರಚಾರ ಆರಂಭಿಸಿದ ಭಾರತ**

**೪. ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿ ಇಂದಿನಿಂದ ಆರಂಭ**

**<>><><*><><<>**

ಭಾರತ ಮತ್ತು ಬ್ರಿಟನ್ ನಡುವಿನ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ನಾಳೆಯಿಂದ ಜಾರಿಗೆ ಬರಲಿದ್ದು, ಈ ಮಹತ್ವದ ಒಪ್ಪಂದವು ಭಾರತೀಯ ರಫ್ತಿಗೆ ಬ್ರಿಟನ್ ಮಾರುಕಟ್ಟೆಯಲ್ಲಿ ಶೇಕಡಾ ೯೯ ರಷ್ಟು ಸುಂಕ ರೇಖೆಗಳಿಗೆ ಶೂನ್ಯ ಸುಂಕದ ಪ್ರವೇಶವನ್ನು ನೀಡುತ್ತದೆ. ಆ ಮೂಲಕ ಬ್ರಿಟನ್ ಸರಕುಗಳು ಅಗ್ಗವಾಗಲಿದ್ದು, ಇದೇ ವೇಳೆ ಭಾರತದ ರಫ್ತಿನ ಪ್ರಮಾಣ ಏರಿಕೆಯಾಗಲಿದೆ. ಇದು ಭಾರತ ಮತ್ತು ಬ್ರಿಟನ್ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಉಭಯ ದೇಶಗಳ ನಡುವೆ ಕಾರ್ಯತಂತ್ರದ ಪಾಲುದಾರಿಕೆಯನ್ನು ಗಾಢವಾಗಿಸಲು ಈ ಐತಿಹಾಸಿಕ ಒಪ್ಪಂದಕ್ಕೆ ೨೦೨೧ ರ ಮೇ ನಲ್ಲಿ ಅಡಿಪಾಯ ಹಾಕಲಾಯಿತು. ಅದರಂತೆ ಈ ವ್ಯಾಪಾರ ಪಾಲುದಾರಿಕೆ ಮತ್ತು ಭಾರತ-ಯುಕೆ ಮಾರ್ಗಸೂಚಿ ೨೦೩೦ರ ಅಳವಡಿಕೆಯ ಮೂಲಕ ನಡೆಯಲಿದ್ದು, ಮುಂದಿನ ೪ ವರ್ಷಗಳಲ್ಲಿ ವ್ಯಾಪಾರವನ್ನು ೧೦೦ ಬಿಲಿಯನ್ ಯುಎಸ್ ಡಾಲರ್‌ಗೆ ದ್ವಿಗುಣಗೊಳಿಸುವ ಗುರಿಯನ್ನು ಹೊಂದಿದೆ.

**<>><><*><><<>**

ಭಾರತದ ಅತಿದೊಡ್ಡ ಜಾಗತಿಕ ಜವಳಿ ಕಾರ್ಯಕ್ರಮವಾದ ಭಾರತ್ ಟೆಕ್ಸ್ ೨೦೨೬ ಇಂದು ನವದೆಹಲಿಯ ಭಾರತ್ ಮಂಟಪದಲ್ಲಿ ಪ್ರಾರಂಭವಾಗಿದ್ದು, ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ನಾಲ್ಕು ದಿನಗಳ ಈ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಕಾರ್ಯಕ್ರಮವು ಜವಳಿ, ಫ್ಯಾಷನ್, ಸುಸ್ಥಿರತೆ, ತಂತ್ರಜ್ಞಾನ, ನಾವೀನ್ಯತೆ, ಹೂಡಿಕೆ ಮತ್ತು ಅಂತರರಾಷ್ಟ್ರೀಯ ವ್ಯಾಪಾರದಲ್ಲಿ ಭಾರತದ ಬೆಳೆಯುತ್ತಿರುವ ಜಾಗತಿಕ ನಾಯಕತ್ವವನ್ನು ಪ್ರದರ್ಶಿಸುತ್ತಿದೆ. ಇದು ತಯಾರಕರು, ರಫ್ತುದಾರರು, ಜಾಗತಿಕ ಖರೀದಿದಾರರು, ಹೂಡಿಕೆದಾರರು, ನೀತಿ ನಿರೂಪಕರು, ಅಂತಾರಾಷ್ಟ್ರೀಯ ನಿಯೋಗಗಳು, ಕುಶಲಕರ್ಮಿಗಳು, ಸ್ಟಾರ್ಟ್-ಅಪ್‌ಗಳು ಮತ್ತು ತಂತ್ರಜ್ಞಾನ ಪೂರೈಕೆದಾರರನ್ನು ಒಟ್ಟುಗೂಡಿಸಿದೆ. ಪ್ರಧಾನಿ ನರೇಂದ್ರ ಮೋದಿಯವರ ೫ಎಫ್ ವಿಷನ್ -

ಫಾರ್ಮ್‌ನಿಂದ ಫೈಬರ್‌ನಿಂದ ಫ್ಯಾಕ್ಟರಿಯಿಂದ ಫ್ಯಾಷನ್‌ನಿಂದ ವಿದೇಶಿಗೆ ಸ್ಫೂರ್ತಿ ಪಡೆದ ಭಾರತ್ ಟೆಕ್ಸ್ ೨೦೨೬, ಜವಳಿ ಮೌಲ್ಯ ಸರಪಳಿಯಾದ್ಯಂತ ವ್ಯವಹಾರ, ಹೂಡಿಕೆ, ನಾವೀನ್ಯತೆ, ನೀತಿ ಸಂವಾದ ಮತ್ತು ಕಾರ್ಯತಂತ್ರದ ಪಾಲುದಾರಿಕೆಗಳಿಗೆ ಪ್ರಮುಖ ಜಾಗತಿಕ ವೇದಿಕೆಯಾಗಿ ವಿಕಸನಗೊಂಡಿದೆ. ಭಾರತ್ ಟೆಕ್ಸ್ ೨೦೨೬ರ ಮೂರನೇ ಆವೃತ್ತಿಯು ಸುಮಾರು ಏಳು ಸಾವಿರ ಖರೀದಿದಾರರು ಮತ್ತು ೨೦ ಸಾವಿರಕ್ಕೂ ಹೆಚ್ಚು ಜವಳಿ ಉತ್ಪನ್ನಗಳ ಭಾಗವಹಿಸುವಿಕೆಗೆ ಸಾಕ್ಷಿಯಾಗಿದೆ. ೧೪ ದೇಶಗಳ ಅಂತಾರಾಷ್ಟ್ರೀಯ ಪ್ರದರ್ಶಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ.

<><><*><><>

ಪ್ರಸಿದ್ಧ ಪುರಿ ಜಗನ್ನಾಥ ದೇವಸ್ಥಾನದಲ್ಲಿ ಇಂದು ಭಗವಾನ್ ಜಗನ್ನಾಥ, ಭಗವಾನ್ ಬಲಭದ್ರ ಹಾಗೂ ದೇವಿ ಸುಭದ್ರೆಯವರ ನವಯೌವನ ದರ್ಶನ ನಡೆಯಲಿದೆ. ಸ್ನಾನ ಪೂರ್ಣಿಮೆಯ ಬಳಿಕ ದೇವರುಗಳು ಆಚರಣಾತ್ಮಕ ಅಸ್ವಸ್ಥತೆಯಿಂದ ಚೇತರಿಸಿಕೊಳ್ಳುವ ಸಲುವಾಗಿ ಪಾಲಿಸಲಾಗುವ ಹದಿನೈದು ದಿನಗಳ ಅವಧಿ ಪೂರ್ಣಗೊಂಡ ನಂತರ, ದೇವತೆಗಳು ಮೊದಲ ಬಾರಿಗೆ ಸಾರ್ವಜನಿಕರಿಗೆ ದರ್ಶನ ನೀಡಲಿದ್ದಾರೆ. ನವಯೌವನದ ರೂಪದಲ್ಲಿ ದೇವರ ದರ್ಶನ ಪಡೆಯಲು ದೇಶದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆಯಿದೆ. ಭಕ್ತರಿಗೆ ಸುಗಮ ಮತ್ತು ಶಿಸ್ತುಬದ್ಧ ದರ್ಶನ ಕಲ್ಪಿಸುವ ಉದ್ದೇಶದಿಂದ ದೇವಸ್ಥಾನ ಆಡಳಿತ ಮಂಡಳಿ, ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ವ್ಯಾಪಕ ಭದ್ರತೆ, ಜನಸಂದಣಿ ನಿಯಂತ್ರಣ ಹಾಗೂ ಸಂಚಾರ ವ್ಯವಸ್ಥೆಗಳನ್ನು ಕಲ್ಪಿಸಿವೆ. ಇದೇ ಗುರುವಾರ ನಡೆಯಲಿರುವ ರಥಯಾತ್ರೆಯಲ್ಲಿ ಜಗನ್ನಾಥ, ಬಲಭದ್ರ ಮತ್ತು ಸುಭದ್ರೆಯವರು ಸಂಪ್ರದಾಯಬದ್ಧವಾಗಿ ಶ್ರೀ ಗುಂಡಿಚಾ ದೇವಸ್ಥಾನದತ್ತ ಪಯಣ ಬೆಳೆಸಲಿದ್ದಾರೆ.

<><><*><><>

ಭಾರತವು ೨೦೨೮-೨೯ರ ಅವಧಿಗೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಶಾಶ್ವತವಲ್ಲದ ಸದಸ್ಯತ್ವಕ್ಕಾಗಿ ಅಧಿಕೃತವಾಗಿ ಚುನಾವಣಾ ಪ್ರಚಾರವನ್ನು ಪ್ರಾರಂಭಿಸಿದೆ. ನ್ಯೂಯಾರ್ಕ್‌ನಲ್ಲಿರುವ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಭಾರತದ ಉಮೇದುವಾರಿಕೆಯನ್ನು ಉದ್ಘಾಟಿಸಿದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಜಗತ್ತು ಬೆಳೆಯುತ್ತಿರುವ ಸಂಘರ್ಷ ಮತ್ತು ಅಸ್ಥಿರತೆಯನ್ನು ಎದುರಿಸುತ್ತಿದೆ, ಇದು ವಿಶ್ವಸಂಸ್ಥೆಯ ಪಾತ್ರವನ್ನು ಎಂದಿಗಿಂತಲೂ ಹೆಚ್ಚು ನಿರ್ಣಾಯಕವಾಗಿಸಿದೆ ಎಂದು ತಿಳಿಸಿದರು. ಜಾಗತಿಕ ಶಾಂತಿ, ಭದ್ರತೆ ಮತ್ತು ಸಮಾನ ಅಭಿವೃದ್ಧಿಯನ್ನು ಉತ್ತೇಜಿಸುವಲ್ಲಿ ದೇಶದ ಮಾರ್ಗದರ್ಶಿ ವಿಧಾನವಾಗಿ ಭಾರತದ ಶಾಂತಿ ದೃಷ್ಟಿಕೋನ, ಮಾನದಂಡಗಳು, ನಂಬಿಕೆ ಮತ್ತು ಸಮಗ್ರತೆಯ ಮೂಲಕ ಸಮಗ್ರ ಪ್ರಗತಿಯನ್ನು ಭದ್ರಪಡಿಸುವ ಬಗ್ಗೆ ಸಚಿವರು ಒತ್ತಿ ಹೇಳಿದರು. ಸಂಸ್ಥೆಯು ಸ್ಥಾಪನೆಯಾದಾಗಿನಿಂದ ಸುಮಾರು ೫೦ ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳಿಗೆ ಭಾರತ ಸುಮಾರು ಮೂರು ಲಕ್ಷ ಸಿಬ್ಬಂದಿಯನ್ನು ಕೊಡುಗೆ ನೀಡಿದೆ. ಪ್ರಸ್ತುತ ೪,೩೦೦ ಕ್ಕೂ ಹೆಚ್ಚು ಸಿಬ್ಬಂದಿ ೧೦ ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ ಸೇವೆ ಸಲ್ಲಿಸುತ್ತಿದೆ ಎಂದು ಹೇಳಿದರು.

<><><*><><>

ಕತಾರ್‌ನ ಪಿತಾಮಹ ಅಮೀರ್ ಶೇಖ್ ಹಮದ್ ಬಿನ್ ಖಲೀಫಾ ಅಲ್ ಥಾನಿ ಅವರ ನಿಧನಕ್ಕೆ ಭಾರತ ಪರವಾಗಿ ಸಂತಾಪ ಸೂಚಿಸಲು ಸಂಸದೀಯ ವ್ಯವಹಾರಗಳು ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಇಂದು ದೋಹಾಗೆ ಪ್ರಯಾಣ ಬೆಳೆಸಿದರು. ಆಧುನಿಕ ಕತಾರ್ ಅನ್ನು ನಿರ್ಮಿಸುವಲ್ಲಿ ಅಮೀರ್ ಶೇಖ್ ಹಮದ್

ಪ್ರಮುಖ ಪಾತ್ರ ವಹಿಸಿದ್ದರು ಮತ್ತು ಅವರು ಭಾರತದ ಉತ್ತಮ ಸ್ನೇಹಿತರಾಗಿದ್ದರು ಎಂದು ವಿದೇಶಾಂಗ ಸಚಿವಾಲಯ ಹೇಳಿದೆ. ಭಾರತ-ಕತಾರ್ ಸಂಬಂಧವನ್ನು ನಿರ್ಮಿಸಲು ಅವರು ನೀಡಿದ ಅಮೂಲ್ಯ ಕೊಡುಗೆಗಾಗಿ ಸ್ಮರಿಸಲಾಗುವುದು ಎಂದು ಅದು ಹೇಳಿದೆ.

**<>><><*><><<>**

ಬರ್ಮಿಂಗ್‌ಹ್ಯಾಮ್‌ನಲ್ಲಿ ಇಂದು ನಡೆಯಲಿರುವ ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿ ಇಂದಿನಿಂದ ಆರಂಭವಾಗಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿದೆ.  ಇಂದಿನ ಪಂದ್ಯದಲ್ಲಿ ರೋಹಿತ್ ಶರ್ಮಾ, ವಿರಾಟ್ ಕೋಹ್ಲಿ, ಜಸ್ಪ್ರಿತ್ ಬೂಮ್ರಾ ಒಟ್ಟಾಗಿ ಕಣಕ್ಕಿಳಿಯಲಿದ್ದಾರೆ.

**<>><><*><><<>**

ಭಾರತದ ಜೂನಿಯರ್ ಮಹಿಳಾ ಅಂಡರ್-೨೧ ಹಾಕಿ ತಂಡವು ಇಂದು ಇಂಗ್ಲೆಂಡ್‌ನ ಲಿಲ್ಲೆಶಾಲ್ ರಾಷ್ಟ್ರೀಯ ಕ್ರೀಡಾ ಕೇಂದ್ರದಲ್ಲಿ ಯುನೈಟೆಡ್ ಕಿಂಗ್‌ಡಮ್ ಎಕ್ಸ್‌ಪೋಸರ್ ಪ್ರವಾಸದ ಅಂತಿಮ ಪಂದ್ಯದಲ್ಲಿ ಬೆಲ್ಜಿಯಂ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨.೩೦ಕ್ಕೆ ಪ್ರಾರಂಭವಾಗಲಿದೆ. ಇಂಗ್ಲೆಂಡ್ ವಿರುದ್ಧ ೨-೦ ಅಂತರದ ಅದ್ಭುತ ಜಯದೊಂದಿಗೆ ಭಾರತ ತಂಡವು ಪ್ರವಾಸವನ್ನು ಗೆಲುವಿನೊಂದಿಗೆ ಕೊನೆಗೊಳಿಸುವ ಗುರಿಯನ್ನು ಹೊಂದಿದೆ.

**<>><><*><><<>**

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ನಿನ್ನೆ ನ್ಯೂಯಾರ್ಕ್‌ನಲ್ಲಿ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್ ಅವರು ಪಶ್ಚಿಮ ಏಷ್ಯಾ, ಉಕ್ರೇನ್ ಮತ್ತು ಸುಡಾನ್ ಸೇರಿದಂತೆ ಜಾಗತಿಕ ಬೆಳವಣಿಗೆಗಳ ಕುರಿತು ಚರ್ಚಿಸಿದ್ದಾರೆ ಎಂದು ಹೇಳಿದರು. ಅವರು ೨೦೨೮-೨೯ ಅವಧಿಗೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಶಾಶ್ವತವಲ್ಲದ ಸ್ಥಾನಕ್ಕಾಗಿ ಭಾರತದ ಅಭಿಯಾನವನ್ನು ಮುನ್ನಡೆಸಲು ಡಾ. ಜೈಶಂಕರ್ ನ್ಯೂಯಾರ್ಕ್‌ನಲ್ಲಿದ್ದಾರೆ.

**<>><><*><><<>**

ಸೌದಿ ಅರೇಬಿಯಾದ ಅಬ್ಹಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ನಿನ್ನೆ ಕ್ಷಿಪಣಿಗಳು ಹಾಗೂ ಡ್ರೋನ್‌ಗಳ ಮೂಲಕ ದಾಳಿ ನಡೆಸಿರುವುದಾಗಿ ಯೆಮೆನ್‌ನ ಇರಾನ್ ಬೆಂಬಲಿತ ಹೌತಿ ಬಂಡುಕೋರರು ಹೇಳಿದ್ದಾರೆ. ಯೆಮೆನ್‌ನ ಸನಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಸೌದಿ ಅರೇಬಿಯಾ ನೇತೃತ್ವದ ವೈಮಾನಿಕ ದಾಳಿ ನಡೆದಿದ್ದಕ್ಕೆ ಪ್ರತೀಕಾರವಾಗಿ ಈ ದಾಳಿ ನಡೆಸಲಾಗಿದೆ ಎಂದು ಹೌತಿ ಬಂಡುಕೋರರು ತಿಳಿಸಿದ್ದಾರೆ. ದಾಳಿಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಆದರೆ, ಹಲವು ವರ್ಷಗಳ ಹಿಂದೆ ಸೌದಿ ನೇತೃತ್ವದ ಮೈತ್ರಿಕೂಟವು ಹೌತಿ ನಿಯಂತ್ರಿತ ಪ್ರದೇಶಗಳ ಮೇಲೆ ನಡೆಸಿದ್ದ ದಾಳಿಯ ಬಳಿಕ ಇದೇ ಮೊದಲ ಬಾರಿಗೆ ಉದ್ವಿಗ್ನತೆ ತೀವ್ರಗೊಂಡಿದೆ. ಯೆಮೆನ್‌ನಲ್ಲಿ ನಡೆದಿರುವ ವೈಮಾನಿಕ ದಾಳಿಗಳ ಕುರಿತು ಸೌದಿ ಅರೇಬಿಯಾ ಅಧಿಕಾರಿಗಳು ತಕ್ಷಣವೇ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಹೌತಿ ಸೇನಾ ವಕ್ತಾರ ಬ್ರಿಗೇಡಿಯರ್ ಜನರಲ್ ಯಾಹ್ಯಾ ಸರಿ ಅವರು, ಸನಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲಿನ ನಿರ್ಬಂಧ ತೆರವುಗೊಳ್ಳುವವರೆಗೆ ಸೌದಿ

ಅರೇಬಿಯಾದ ವಾಯುಪ್ರದೇಶದ ಮೂಲಕ ಸಂಚರಿಸದಂತೆ ವಿಮಾನಯಾನ ಸಂಸ್ಥೆಗಳಿಗೆ ಎಚ್ಚರಿಕೆ ನೀಡಿದ್ದಾರೆ. ಈ ಎಚ್ಚರಿಕೆಯನ್ನು ಗಂಭೀರವಾಗಿ ಪರಿಗಣಿಸುವಂತೆ ಅವರು ಮನವಿ ಮಾಡಿದ್ದಾರೆ.

**<>><><*><><<>**

ಅಮೆರಿಕದ ಟೆಕ್ಸಾಸ್ ರಾಜ್ಯದ ಡಲ್ಲಾಸ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಫಿಫಾ ವಿಶ್ವಕಪ್ ಫುಟ್‌ಬಾಲ್ ಪಂದ್ಯಾವಳಿಯ ಮೊದಲ ಸೆಮಿಫೈನಲ್‌ನಲ್ಲಿ ಫ್ರಾನ್ಸ್ ಮತ್ತು ಸ್ಪೇನ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ತಡರಾತ್ರಿ ೧೨ ಗಂಟೆ ೩೦ ನಿಮಿಷಕ್ಕೆ ಆರಂಭವಾಗಲಿದೆ. ಸತತ ಮೂರನೇ ಬಾರಿಗೆ ಫಿಫಾ ವಿಶ್ವಕಪ್ ಫೈನಲ್ ಪ್ರವೇಶಿಸುವ ಗುರಿಯೊಂದಿಗೆ ಫ್ರಾನ್ಸ್ ಕಣಕ್ಕಿಳಿಯುತ್ತಿದೆ. ಇತ್ತ, ೨೦೧೦ರಲ್ಲಿ ವಿಶ್ವಕಪ್ ಪ್ರಶಸ್ತಿ ಗೆದ್ದ ಬಳಿಕ ಮೊದಲ ಬಾರಿಗೆ ಫೈನಲ್ ಪ್ರವೇಶಿಸುವ ಉದ್ದೇಶದಿಂದ ಸ್ಪೇನ್ ತಂಡ ಸೆಮಿಫೈನಲ್‌ನಲ್ಲಿ ಸೆಣಸಲಿದೆ.

**<>><><*><><<>**

ಹಾರ್ಮುಜ್ ಜಲಸಂಧಿ ಮೂಲಕ ಸಾಗುತ್ತಿದ್ದ ಸಂಯುಕ್ತ ಅರಬ್ ಎಮಿರೇಟ್ಸ್‌ಗೆ ಸೇರಿದ ಎರಡು ತೈಲ ಟ್ಯಾಂಕರ್‌ಗಳ ಮೇಲೆ ಇರಾನ್ ಕ್ರೂಸ್ ಕ್ಷಿಪಣಿಗಳ ದಾಳಿ ನಡೆಸಿದ ಪರಿಣಾಮ ಭಾರತೀಯ ಸಿಬ್ಬಂದಿಯೊಬ್ಬರು ಮೃತಪಟ್ಟಿದ್ದು, ಇತರ ಆರು ಭಾರತೀಯರು ಸೇರಿದಂತೆ ಎಂಟು ಮಂದಿ ಗಾಯಗೊಂಡಿದ್ದಾರೆ. ಸಂಯುಕ್ತ ಅರಬ್ ಎಮಿರೇಟ್ಸ್ ರಕ್ಷಣಾ ಸಚಿವಾಲಯದ ಪ್ರಕಾರ, ಒಮಾನ್ ಪ್ರಾದೇಶಿಕ ಸಮುದ್ರ ವ್ಯಾಪ್ತಿಯ ಹೋರ್ಮುಜ್ ಜಲಸಂಧಿಯ ದಕ್ಷಿಣ ಮಾರ್ಗದಲ್ಲಿ ಸಂಚರಿಸುತ್ತಿದ್ದ ಮೊಂಬಾಸಾ ಮತ್ತು ಅಲ್ ಬಹಿಯಾಹ್ ತೈಲ ಟ್ಯಾಂಕರ್‌ಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**